1. ಶಿರಾ ಟೌನ್ ಕಲ್ಲುಕೋಟೆ ಸರ್ವೇ ನಂ. 56/1 ರಲ್ಲಿ 3 ಎಕರೆ 32 ಗುಂಟೆ ಜಮೀನಿನಲ್ಲಿ 155 ನಿವೇಶನಗಳನ್ನು ರಚಿಸಿ ಅಭಿವೃದ್ಧಿ ಪಡಿಸಿ 155 ಫಲಾನುಭವಿಗಳಿಗೆ ನಿವೇಶನದ ಹಕ್ಕುಪತ್ರ ವಿತರಿಸಲಾಗಿದೆ.

2. ಶಿರಾ ಟೌನ್ ಕಲ್ಲುಕೋಟೆ ಸರ್ವೇ ನಂ. 103/2ಪಿ ರಲ್ಲಿ 8 ಎಕರೆ 8 ಗುಂಟೆ ಜಮೀನನ್ನು ಫೆಬ್ರವರಿ 2004 ರಲ್ಲಿ ಖರೀದಿಸಲಾಗಿದ್ದು, ಸದರಿ ಜಮೀನಿನಲ್ಲಿ 341 ನಿವೇಶನಗಳು ಲಭ್ಯವಿದ್ದು, ನಗರ ಸಭೆಯಿಂದ ಫಲಾನುಭವಿಗಳಿಗೆ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ.

(ಇ) ಸಸದ್ಯಕ್ಕೆ, ಈ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಹುಲಿಗೆಮ್ಮ ದೇವಸ್ಥಾನಕ್ಕೆ ಮೂಲಸೌಲಭ್ಯ ಕಲ್ಪಿಸುವುದು

49 (142) ಶ್ರೀ ಕರಡಿ ಸಂಗಣ್ಣ ಅಮರಪ್ಪ :– ಮಾನ್ಯ ವಸತಿ ಹಾಗೂ ಮುಜರಾಯಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕೊಪ್ಪಳ ತಾಲ್ಲೂಕಿನ ಹುಲಿಗೆಮ್ಮ ದೇವಸ್ಥಾನವು ಯಾತ್ರಾಸ್ಥಳವಾಗಿ ಪರಿವರ್ತನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇದನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಈ ದೇವಸ್ಥಾನಕ್ಕೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಯೋಜನೆಗೆ ಸರ್ಕಾರ ಅನುದಾನ ನೀಡಲಾಗುವುದೇ; ಹಾಗಿದ್ದಲ್ಲಿ, ಎಂದಿನಿಂದ ಅನುದಾನ ನೀಡಲಾಗುವುದೇ?

ಶ್ರೀ ಎಸ್.ಎನ್. ಕೃಷ್ಣಯ್ಯ ಶೆಟ್ಟಿ (ಮಾನ್ಯ ವಸತಿ ಹಾಗೂ ಮುಜರಾಯಿ ಸಚಿವರು):

(ಅ) ಹೌದು

(ಆ) ಈ ಕ್ಷೇತ್ರವನ್ನು ಅಭಿವೃದ್ಧಿಪಡಿಸಲು ಸರ್ಕಾರದ ವತಿಯಿಂದ ಯಾವುದೇ ಕ್ರಮಗಳನ್ನು ಕೈಗೊಂಡಿರುವುದಿಲ್ಲ.

ಆದರೆ ದೇವಾಲಯದ ವತಿಯಿಂದ ಭಕ್ತಾದಿಗಳ ಅನುಕೂಲಕ್ಕಾಗಿ ಕಾಟೇಜುಗಳು, ಕೊಠಡಿಗಳು, ತಂಗುದಾಣ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸಲಾಗಿದೆ. ವಾಹನ ನಿಲುಗಡೆಗೆ ಪಾರ್ಕಿಂಗ್ ಕಾಮಗಾರಿಯು ಪೂರ್ಣಗೊಳ್ಳುವುದರಲ್ಲಿದೆ. ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಶೌಚಾಲಯ ಕಾಮಗಾರಿಯನ್ನು ಕೈಗೊಂಡಿದ್ದು, ಕಟ್ಟಡದ ಉದ್ಘಾಟನೆಯಾಗಬೇಕಿದೆ.

(ಇ) ಆದರೆ ದೇವಾಲಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ದುರಸ್ಥಿ ಹಾಗೂ ಒಳಚರಂಡಿ ಕಾಮಗಾರಿಗೆ ಸಂಬಂಧಿಸಿದಂತೆ ದೇವಾಲಯದ ಆಡಳಿತ ವರ್ಗದವರು ರೂ. 86.50 ಲಕ್ಷದ ಪ್ರಸ್ಥಾವನೆಯನ್ನು ಸಲ್ಲಿಸಿದ್ದು, ಈ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

(ಈ) ಶ್ರೀ ಹುಲಿಗೆಮ್ಮ ದೇವಾಲಯದಲ್ಲಿ ವಾರ್ಷಿಕ ಆದಾಯವು 2007–08ನೇ ಸಾಲಿನಲ್ಲಿ ರೂ. 1,59,89,100/– ಇರುವುದರಿಂದ ಸರ್ಕಾರದಿಂದ ಅನುದಾನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

50 (143) ಶ್ರೀ ಕರಡಿ ಸಂಗಣ್ಣ ಅಮರಪ್ಪ :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕೊಪ್ಪಳದಲ್ಲಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು;

(ಇ) ಮೇಲ್ಕಂಡ ಕಾಲೇಜುಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು;

(ಈ) ಮುಂಬರುವ ಶೈಕ್ಷಣಿಕ ವರ್ಷದಿಂದ ಮೇಲ್ಕಂಡ ಕಾಲೆಜುಗಳನ್ನು ತೆರೆಯಲಾಗುವುದೇ?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):

(ಅ) ಕೊಪ್ಪಳದಲ್ಲಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

(ಆ) ಉದ್ಭವಿಸುವುದಿಲ್ಲ

(ಇ) ಉದ್ಭವಿಸುವುದಿಲ್ಲ

(ಈ) ಉದ್ಭವಿಸುವುದಿಲ್ಲ

51 (40) ಶ್ರೀ ಹೆಚ್.ಕೆ. ಕುಮಾರಸ್ವಾಮಿ (ಸಕಲೇಶಪುರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಇತ್ತೀಚಿಗೆ ಅನುದಾನಕ್ಕೆ ಒಳಪಟ್ಟ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಆಡಳಿತ ಮಂಡಳಿಯ ಶಾಲಾ ಕಾಲೇಜುಗಳ ಶಿಕ್ಷಕೇತರ ಸಿಬ್ಬಂದಿಯನ್ನು (ಅಟೆಂಡರ್, ಜವಾನ) ನೇಮಕಾತಿಗೆ ಅವಕಾಶ ಮಾಡದಿರುವುದು ನಿಜವೇ;

(ಆ) ಈ ನೇಮಕಾತಿಗೆ ಸರ್ಕಾರವು ಕೈಗೊಳ್ಳುವ ಕ್ರಮವೇನು?